# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 756 |
| **ಮಾನ್ಯ ಸದಸ್ಯರ ಹೆಸರು:** | ಶ್ರೀ. ಹೆಚ್.ಎಸ್. ಗೋಪಿನಾಥ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ:** | 18.08.2025. |
| **ಉತ್ತರಿಸುವ ಸಚಿವರು:** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗ್ರಾಮೀಣ ಭಾಗದ ಜನರ ಆರೋಗ್ಯಾಭಿವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು; | ರಾಷ್ಟ್ರೀಯ ಆರೋಗ್ಯ ಅಭಿಯಾನದ ಸಾರ್ವತ್ರಿಕ ಆರೋಗ್ಯ ರಕ್ಷಣೆ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ಹಿತದೃಷ್ಟಿಯಿಂದ ಉಪಕೇಂದ್ರ ಮತ್ತು ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಆಯುಷ್ಮಾನ್ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ನಿಯಮಾನುಸಾರ ನಿಗದಿಪಡಿಸಲಾದ ಪದವಿ ಪಡೆದಿರುವ ಅಭ್ಯರ್ಥಿಗಳಿಗೆ ಆನ್ ಲೈನ್ ಮೂಲಕ ಪರೀಕ್ಷೆ ನಡೆಸಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ನಿಯಮಾನುಸಾರ ಅಗತ್ಯವಿರುವ ತರಬೇತಿಗಳನ್ನು ನೀಡಿ ತರಬೇತಿ ಪೂರ್ಣಗೊಳಿಸಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಸಮುದಾಯ ಆರೋಗ್ಯ ಅಧಿಕಾರಿಗಳನ್ನಾಗಿ (Community Health Officer) ಗ್ರಾಮೀಣ ಪ್ರದೇಶದ ಜನರಿಗೆ 12 ವಿಸ್ತೃತ ಆರೋಗ್ಯ ಸೇವೆ ನೀಡಲು ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ನಿಯೋಜಿಸಲಾಗಿದೆ<br><br>ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ನೀಡುವ 12 ವಿಸ್ತೃತ ಆರೋಗ್ಯ ಸೇವೆಗಳು ಈ ಕೆಳಕಂಡಂತಿದೆ:<br><br>1. ತಾಯಿ ಆರೋಗ್ಯ- ಗರ್ಭಿಣಿ ಹಾಗೂ ಬಾಣಂತಿ ಸೇವೆಗಳು<br>2. ನವಜಾತ ಶಿಶು ಆರೈಕೆ ಹಾಗೂ ಚುಚ್ಚು ಮದ್ದು ಸೇವೆಗಳು<br>3.ಮಕ್ಕಳ ಹಾಗೂ ಹದಿಯರೆಯದವರ ಆರೋಗ್ಯಕ್ಕೆ ಸಂಬಂಧಿಸಿದ ಸೇವೆಗಳು<br>4. ಕುಟುಂಬ ಕಲ್ಯಾಣ ಯೋಜನೆಗಳ ಅಡಿಯಲ್ಲಿ ಸೇವೆಗಳು<br>5.ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು<br>6. ಸಾಂಕ್ರಾಮಿಕ ರೋಗಗಳ ನಿರ್ವಹಣೆ<br>7. ಅಸಾಂಕ್ರಾಮಿಕ ರೋಗಗಳ ನಿರ್ವಹಣೆ<br>8. ಹಿರಿಯ ನಾಗರಿಕರ ಹಾಗೂ ಅಂತಿಮ ಹಂತದ |

| | | |
|---|---|---|
| | | ಆರೋಗ್ಯ ಪಾಲನೆ<br>9. ಕಣ್ಣಿನ ಆರೋಗ್ಯ ಸೇವೆಗಳು<br>10. ದಂತ ಆರೋಗ್ಯ ಸೇವೆಗಳು<br>11. ತುರ್ತು ವೈದ್ಯಕೀಯ ಸೇವೆಗಳು<br>12.ಮಾನಸಿಕ ಆರೋಗ್ಯ ಸೇವೆಗಳು. |
| ಆ | ಸ್ಥಳೀಯ ಮಟ್ಟದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ; | ರಾಜ್ಯ ಮಟ್ಟದಲ್ಲಿ 2022 ರಿಂದ 2025 ರವರೆಗೆ ಒಟ್ಟು 82 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. |
| ಇ | ಸರ್ಕಾರವು 5 ವರ್ಷದ ಅವಧಿಯಲ್ಲಿ ಒಟ್ಟಾರೆ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಹಾಕಿಕೊಂಡಿದೆ? (ವರ್ಷಾವಾರು ವಿವರ ನೀಡುವುದು) | IPHS ಮಾರ್ಗಸೂಚಿ 2022ರನ್ವಯ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳನ್ನು ಜನಸಂಖ್ಯೆ ಆಧಾರದ ಮೇಲೆ ಸ್ಥಾಪಿಸಲಾಗುತ್ತಿದ್ದು, ಅಂದರೆ ಸಮತಟ್ಟು ಪ್ರದೇಶದಲ್ಲಿ 1,20,000 ಜನಸಂಖ್ಯೆ ಮತ್ತು ಗುಡ್ಡಗಾಡು, ಗಿರಿಜನ ಪ್ರದೇಶದಲ್ಲಿ 80,000 ಜನಸಂಖ್ಯೆಗೆ ಅನುಗುಣವಾಗಿ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿದೆ.<br><br>• ಆದೇಶದ ಸಂಖ್ಯೆ: ಆಕುಕ 137 ಸಿಜಿಎಂ 2022 (ಭಾಗ-3), ದಿನಾಂಕ: 23.11.2022 ರನ್ವಯ ಒಟ್ಟು 38 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶದ ಸಂಖ್ಯೆ: ಆಕುಕ 137 ಸಿಜಿಎಂ 2022, ದಿನಾಂಕ: 27.07.2022 ರನ್ವಯ ಒಟ್ಟು 05 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 317 ಸಿಜಿಎಂ 2023, ದಿನಾಂಕ: 10.03.2023ರಲ್ಲಿ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹುಳಿಯಾರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಯ ಮಾದರಿ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 201 ಸಿಜಿಎಂ 2022, ದಿನಾಂಕ: 09-07-2024 ರ ಆದೇಶದನ್ವಯ ಒಟ್ಟು 15 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ |

| | | | |
|---|---|---|---|
| | | | ಯೋಜನೆಯಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಕುಕ 391 ಸಿಜಿಇ 2022, ದಿ:27.09.2024 ರ ಆದೇಶದನ್ವಯ ಒಟ್ಟು 10 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 43 ಸಿಜಿಇ 2024, ದಿನಾಂಕ: 16.03.2024ರಲ್ಲಿ ಮೈಸೂರು ಜಿಲ್ಲೆ ಮತ್ತು ತಾಲೂಕಿನ ಸಿದ್ದರಾಮನಹುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 03 ಸಿಜಿಇ 2025, ದಿನಾಂಕ: 03.05.2025ರಲ್ಲಿ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಪಿ.ಜಿ. ಪಾಳ್ಯ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 217 ಸಿಜಿಎಂ 2025, ದಿನಾಂಕ: 08.07.2025 ರ ಆದೇಶದನ್ವಯ ಒಟ್ಟು 08 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು NON-FRU ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>• ಆದೇಶ ಸಂಖ್ಯೆ: ಆಕುಕ 217 ಸಿಜಿಎಂ 2025, ದಿನಾಂಕ: 09.07.2025ರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ಮತ್ತು ತಾಲೂಕಿನ ನಂದಿ ಹಾಗೂ ಚಿಂತಾಮಣಿ ತಾಲೂಕಿನ ಕೈವಾರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು NON-FRU ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. |

**ಕಡತ ಸಂಖ್ಯೆ:** ಆಕುಕ 102 ಎಸ್‌ಬಿವಿ 2025.

**(ದಿನೇಶ್ ಗುಂಡೂರಾವ್ )**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**